ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 396
2. ಸದಸ್ಯರ ಹೆಸರು : ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ :15.03.2021
4. ಉತ್ತರಿಸುವ ಸಚಿವರು : ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

ಕ್ರ ಸಂ	ಪ್ರಶ್ನೆ	ಉತ್ತರ
ಅ)	ರಾಯಚೂರು ವಿಮಾನ ನಿಲ್ದಾಣದ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ರಾಯಚೂರಿನಲ್ಲಿ ವಿಮಾನ ನಿಲ್ದಾಣ ಸ್ಥಾಪನೆಗೆ ಸುಮಾರು 402 ಎಕರೆ ಭೂಮಿಯನ್ನು ಏಗನೂರು ಮತ್ತು ಯರಮರಸ್ ಹಳ್ಳಿಗಳಲ್ಲಿ ಸ್ವಾಧೀನಪಡಿಸಿಕೊಂಡಿದ್ದು, ಜಮೀನಿನ ಸುತ್ತಲು ಯರಮರಸ್ ಶಾಖೋತ್ಪನ್ನ ವಿದ್ಯುತ್ ಮಾರ್ಗಗಳು ಮತ್ತು ಎತ್ತರದ ಚಿಮಿನಿಗಳಿರುವುದರಿಂದ ವಿಮಾನ ಹಾರಾಟಕ್ಕೆ ಅಡಚಣೆ ಉಂಟಾಗುವುದನ್ನು ಪರಿಗಣಿಸಿದ್ದರಿಂದ, ವಿಮಾನ ನಿಲ್ದಾಣದ ಅಭಿವೃದ್ಧಿಯ ಕುರಿತಾದ ವಿಸ್ತೃತ ಯೋಜನಾ ವರದಿ (ಡಿಪಿಆರ್) ತಯಾರಿಸುವ ಕುರಿತು ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತವು ಮೆ|| ರೈಟ್ಸ್ ಇಂಡಿಯಾ ಲಿಮಿಟೆಡ್ ಸಂಸ್ಥೆಯನ್ನು ಯೋಜನಾ ಸಲಹೆಗಾರರನ್ನಾಗಿ ನೇಮಿಸಿ, ದಿನಾಂಕ:25.06.2021ರಂದು ಒಪ್ಪಂದವನ್ನು ಮಾಡಿಕೊಂಡಿರುತ್ತದೆ. ಪ್ರಸ್ತುತ ವಿಸ್ತೃತ ಯೋಜನಾ ವರದಿಯನ್ನು ನಿರೀಕ್ಷಿಸಲಾಗುತ್ತಿದೆ.
ಆ)	ಬಂದಿದ್ದಲ್ಲಿ ಕಾಮಗಾರಿ ಪೂರ್ತಿಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು; ಯಾವ ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪೂರ್ತಿಗೊಳಿಸಲಾಗುವುದು;	
ಇ)	ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಬಿಡುಗಡೆಯಾದ ಹಣವೆಷ್ಟು?	ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ(ಕೆಕೆಆರ್‌ಡಿಬಿ) ವತಿಯಿಂದ ರೂ.11.41 ಕೋಟಿ ಅನುದಾನವನ್ನು ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತಕ್ಕೆ (KSIIDC) ಬಿಡುಗಡೆ ಮಾಡಲಾಗಿರುತ್ತದೆ.

ಸಂಖ್ಯೆ:ಮೂಅಇ 106 ರಾಅವಿ 2021

(ವಿ.ಸೋಮಣ್ಣ)
ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ,
ಸಚಿವರು